**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಕರ್ನಾಟಕ ರಾಜ್ಯದಲ್ಲಿ ಸಾಮಾನ್ಯ ಭವಿಷ್ಯ ನಿಧಿ ಚಂದಾದಾರರ ಖಾತೆಗೆ ಬಡ್ಡಿಯನ್ನು ವಾರ್ಷಿಕವಾಗಿ ಆರ್ಥಿಕ ವರ್ಷದ ಕೊನೆಯ ದಿನದಂದು ಜಮೆ ಮಾಡುವ ಬದಲು ಪ್ರತಿ ತಿಂಗಳ ಕೊನೆಯ ದಿನ ಜಮೆ ಮಾಡುವ ಕುರಿತು.

**ಓದಲಾಗಿದೆ:** 1) ಮಹಾಲೇಖಪಾಲರಿಗೆ ಉದ್ದೇಶಿಸಿರುವ ಸರ್ಕಾರದ ಪತ್ರ ಸಂಖ್ಯೆ: ಆಇ 73 ಜಿಐಇ 2023, ದಿನಾಂಕ:20/09/2023.

2) ಮಹಾಲೇಖಪಾಲರ ಪತ್ರ ಸಂಖ್ಯೆ: VLC 3/J/2023-24, ದಿನಾಂಕ: 12/10/2023.

**//**//**

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರದಲ್ಲಿ AG Entry Exit Conference ನಲ್ಲಿ ಚರ್ಚಿಸಿದಂತೆ ಕರ್ನಾಟಕ ರಾಜ್ಯದಲ್ಲಿ ಸಾಮಾನ್ಯ ಭವಿಷ್ಯ ನಿಧಿ ಚಂದಾದಾರರ ಖಾತೆಗೆ ಬಡ್ಡಿಯನ್ನು ಪ್ರತಿ ತಿಂಗಳ ಕೊನೆಯ ದಿನ ಜಮೆ ಮಾಡಲು ಕೋರಲಾಗಿರುತ್ತದೆ.

ಆ ಸಂಬಂಧ ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ ಮಹಾಲೇಖಪಾಲರು ಕರ್ನಾಟಕ ಸಾಮಾನ್ಯ ಭವಿಷ್ಯ ನಿಧಿ ನಿಯಮಗಳು, 2016ರ ನಿಯಮ 15(2)ರಲ್ಲಿ ಭವಿಷ್ಯ ನಿಧಿ ಚಂದಾದಾರರ ಖಾತೆಗೆ ಬಡ್ಡಿಯನ್ನು ವಾರ್ಷಿಕವಾಗಿ ಆರ್ಥಿಕ ವರ್ಷದ ಕೊನೆಯ ದಿನದಂದು ಜಮೆ ಮಾಡಬೇಕೆಂದು ಉಪಬಂಧಿಸಲಾಗಿರುವುದರಿಂದ, ಅದರಂತೆ ಕ್ರಮ ಕೈಗೊಳ್ಳಲಾಗುತ್ತಿರುವುದಾಗಿ ತಿಳಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ಭವಿಷ್ಯ ನಿಧಿ ಚಂದಾದಾರರ ಖಾತೆಗೆ ಬಡ್ಡಿಯನ್ನು ವಾರ್ಷಿಕವಾಗಿ ಆರ್ಥಿಕ ವರ್ಷದ ಕೊನೆಯ ದಿನದಂದು ಜಮೆ ಮಾಡುವ ಬದಲು ಪ್ರತಿ ತಿಂಗಳ ಕೊನೆಯ ದಿನ ಜಮೆ ಮಾಡಲು ನಿಯಮಗಳಿಗೆ ತಿದ್ದುಪಡಿಯನ್ನು ತರಬೇಕಾಗಿರುತ್ತದೆ. ಆದರೆ ಕರಡು ನಿಯಮಗಳನ್ನು ಪ್ರಕಟಿಸಲು ಸಾಕಷ್ಟು ಕಾಲಾವಕಾಶವು ಬೇಕಾಗಿರುತ್ತದೆ.

ಅದರಂತೆ ಪರಿಶೀಲಿಸಿದ ಸರ್ಕಾರವು ಕರ್ನಾಟಕ ಸಾಮಾನ್ಯ ಭವಿಷ್ಯ ನಿಧಿ ನಿಯಮಗಳು, 2016ರ ನಿಯಮ 15(2)ಕ್ಕೆ ಸಂಬಂಧಿಸಿದಂತೆ ಕಾರ್ಯಕಾರಿ ಆದೇಶದ ಮೂಲಕ ಈ ಮುಂದಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಇ 13 ಮುಭನಿ 2023,**
**ಬೆಂಗಳೂರು, ದಿನಾಂಕ: 18ನೇ ನವೆಂಬರ್, 2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದಲ್ಲಿ ಸಾಮಾನ್ಯ ಭವಿಷ್ಯ ನಿಧಿ ಚಂದಾದಾರರ ಖಾತೆಗೆ ಬಡ್ಡಿಯನ್ನು ವಾರ್ಷಿಕವಾಗಿ ಆರ್ಥಿಕ ವರ್ಷದ ಕೊನೆಯ ದಿನದಂದು ಜಮೆ ಮಾಡುವ ಬದಲು ಪ್ರತಿ ತಿಂಗಳ ಕೊನೆಯ ದಿನ ಜಮೆ ಮಾಡುವಂತೆ ಆದೇಶಿಸಿದೆ.

ಈ ಸಂಬಂಧ ಕರ್ನಾಟಕ ಸಾಮಾನ್ಯ ಭವಿಷ್ಯ ನಿಧಿ ನಿಯಮಗಳು, 2016ರ ನಿಯಮ 15(2)ಕ್ಕೆ ಸೂಕ್ತ ತಿದ್ದುಪಡಿಯನ್ನು ಪ್ರತ್ಯೇಕವಾಗಿ ಪರಿಗಣಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

Dhayapule

**(ನೇತ್ರಪ್ರಭಾ ಎಂ. ಧಾಯಪುಲೆ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಆಡಳಿತ & ಮುಂಗಡಗಳು).

18/11/23

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ) ಕರ್ನಾಟಕ, ಪಿ.ಒ.ಬಾಕ್ಸ್ ನಂ.5329/5369, ಪಾರ್ಕ್ ಹೌಸ್ ರೋಡ್, ಬೆಂಗಳೂರು – 560 001.
2. ಪ್ರಧಾನ ಮಹಾಲೇಖಪಾಲರು (ಜನರಲ್ & ಸೋಷಿಯಲ್ ಸೆಕ್ಟರ್ ಆಡಿಟ್), ಕರ್ನಾಟಕ, ನ್ಯೂ ಬಿಲ್ಡಿಂಗ್, ಆಡಿಟ್ ಭವನ, ಪಿ.ಬಿ.ನಂ.5398, ಬೆಂಗಳೂರು – 560 001.
3. ಪ್ರಧಾನ ಮಹಾಲೇಖಪಾಲರು (ಎಕನಾಮಿಕ್ & ರೆವೆನ್ಯೂ ಸೆಕ್ಟರ್ ಆಡಿಟ್), ಕರ್ನಾಟಕ, ನ್ಯೂ ಬಿಲ್ಡಿಂಗ್, ಆಡಿಟ್ ಭವನ, ಪಿ.ಬಿ.ನಂ.5398, ಬೆಂಗಳೂರು – 560 001.
4. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು / ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು.
5. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳಿಗೆ.
6. ಸರ್ಕಾರದ ಉಪ ಕಾರ್ಯದರ್ಶಿ (ಬಿ & ಆರ್), ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
7. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
8. ರಿಜಿಸ್ಟ್ರಾರ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
9. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು.
10. ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
11. ಕಾರ್ಯದರ್ಶಿಗಳು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
12. ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭೆ / ವಿಧಾನ ಪರಿಷತ್, ವಿಧಾನ ಸೌಧ, ಬೆಂಗಳೂರು.
13. ಎಲ್ಲಾ ಜಿಲ್ಲಾಧಿಕಾರಿಗಳಿಗೆ,
14. ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
15. ವಿಶೇಷಾಧಿಕಾರಿಗಳು, ಆರ್ಥಿಕ ಇಲಾಖೆ, ಗಣಕ ಕೋಶ-ಆರ್ಥಿಕ ಇಲಾಖೆಯ ವೆಬ್-ಸೈಟ್ ನಲ್ಲಿ ಅಪ್-ಲೋಡ್ ಮಾಡಲು.
16. ಕಛೇರಿ ಪ್ರತಿ / ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.